ಅ) ಸುಮಾರು ಒಂದು ವರ್ಷದಿಂದ ನೋಂದಾವಣೆ ಮಾಡದೆ ವಿನಾಕಾರಣಗಳನ್ನು ಕೊಡುತ್ತಾ ಮುಂದಕ್ಕೆ ಹಾಕುತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರದವರು ಕೂಡಲೇ ಸೂಕ್ತ ಶಿಸ್ತು ಕ್ರಮ ಕೈಗೊಳ್ಳುವರೆ?

ಶ್ರೀ ಬಸವರಾಜ್ ಪಾಟೀಲ್ (ಪಶು ಸಂಗೋಪನಾ, ಪಶು ವೈದ್ಯ ಸೇವಾ ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಹಾಲಿನ ಬೆಲೆಯನ್ನು ಹೆಚ್ಚಿಸುವುದರ ಬಗ್ಗೆ

3379 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೋಲಾರ ಬೆಂಗಳೂರು, ತುಮಕೂರು ಮತ್ತು ಇತರೆ ಜಿಲ್ಲೆಗಳ ಹಾಲು ಉತ್ಪಾದಕರಿಂದ ಇತ್ತೀಚೆಗೆ ಜಾನುವಾರು ಮೇವಿನ ಬೆಲೆಗಳು ಜಾಸ್ತಿಯಾಗಿರುವ ಪ್ರಯುಕ್ತ ಹಾಲಿನ ಬೆಲೆಯನ್ನು ಹೆಚ್ಚಿಸಬೇಕೆಂದು ಮನವಿಗಳು ಬಂದಿವೆಯೇ?

ಆ) ಹಾಗಿದ್ದಲ್ಲಿ ಮನವಿಗಳ ಸಾರಾಂಶವೇನು?

ಇ) ಮನವಿಗಳ ಮೇಲೆ ಸರ್ಕಾರದವರು ತೆಗೆದುಕೊಂಡಿರುವ ತೀರ್ಮಾನವೇನು?

ಶ್ರೀ ಬಸವರಾಜ್ ಪಾಟೀಲ್ (ಪಶು ಸಂಗೋಪನಾ ಪಶು ವೈದ್ಯ ಸೇವಾ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಬೇಲಿಮಲ್ಲೂರು ಹತ್ತಿರ ತೋಟಗಾರಿಕಾ ಇಲಾಖೆಯ ಜಮೀನಿನ ವಿಸ್ತೀರ್ಣ

3477 - ಡಾ॥ವಿ.ಬಿ. ಗಂಗಪ್ಪ (ಹೊನ್ನಾಳಿ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊನ್ನಾಳಿ ತಾಲ್ಲೂಕಿನ ಬೇಲಿಮಲ್ಲೂರು ಹತ್ತಿರ ತೋಟಗಾರಿಕಾ ಇಲಾಖೆಗೆ ಸಂಬಂಧಪಟ್ಟ ತೋಟ ಹಾಗೂ ನರ್ಸರಿಗಳಿರುವ ಜಮೀನು ಎಷ್ಟಿವೆ? (ವಿವರವನ್ನು ಒದಗಿಸುವುದು)

ಶ್ರೀ ಎಂ.ಎಸ್. ಆತ್ಮಾನಂದ (ತೋಟಗಾರಿಕೆ ರಾಜ್ಯ ಸಚಿವರು):

ಅ) ಬೇಲಿಮಲ್ಲೂರು ತೋಟಗಾರಿಕೆ ಕ್ಷೇತ್ರ - 25 ಎಕರೆ
ಹೊನ್ನಾಳಿ ಸಸ್ಯಾಗಾರ (ನರ್ಸರಿ) - 1.20 ಎಕರೆ